## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಆದಿಚುಂಚನಗಿರಿ ವಿಶ್ವವಿದ್ಯಾಲಯದಡಿ BGS Vijnatham Institute of Nursing Sciences, ಬೆಂಗಳೂರು ಇಲ್ಲಿ ಬಿ.ಎಸ್ಸಿ ನರ್ಸಿಂಗ್ ಕೋರ್ಸನ್ನು ಸೀಟುಗಳ ಪ್ರವೇಶಮಿತಿಯನ್ನು ಹೆಚ್ಚಿಸಲು ಅನುಮತಿ ನೀಡುವ ಬಗ್ಗೆ

**ಓದಲಾಗಿದೆ:** (1) ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 264 ಎಂಎಂಸಿ 2024 (ಭಾಗ-1)(1), ದಿನಾಂಕ: 05.08.2024

(2) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: DME/NRC(1)/16/2024-25, ದಿನಾಂಕ: 06.08.2024 ಮತ್ತು ಏಕಕಡತ ಸಂಖ್ಯೆ: E-Comp. No.: ಇ-1486754

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರ ಆದೇಶದಲ್ಲಿ, ಆದಿಚುಂಚನಗಿರಿ ವಿಶ್ವವಿದ್ಯಾಲಯ ಇದರಡಿಯಲ್ಲಿ BGS Vijnatham Institute of Nursing Sciences, Vijnatham South Campus, Nagarur, Dasanapura Bengaluru North, Bengaluru-562123 ಈ ಸಂಸ್ಥೆಯಲ್ಲಿ 2024-25ನೇ ಸಾಲಿನಿಂದ ಬಿ.ಎಸ್ಸಿ ನರ್ಸಿಂಗ್ ಕೋರ್ಸನ್ನು 150 ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡಿ, ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ BSG Vijnatham Institute of Nursing Sciences, ನಗರೂರು ಬೆಂಗಳೂರು ನಗರ ಇಲ್ಲಿಗೆ ನಿರ್ದೇಶನಾಲಯದಿಂದ ನೇಮಿಸಲಾಗಿದ್ದ ತಪಾಸಣಾಧಿಕಾರಿಗಳು ಸಂಸ್ಥೆಗೆ ಭೇಟಿ ನೀಡಿ ಸಂಸ್ಥೆಯು 600 ಹಾಸಿಗೆ ಸಾಮರ್ಥ್ಯವುಳ್ಳ ಆಸ್ಪತ್ರೆಯಾಗಿರುವುದರಿಂದ ಹಾಗೂ ಎಲ್ಲಾ ಮೂಲಭೂತ ಸೌಲಭ್ಯಗಳು ಹೊಂದಿರುವುದರಿಂದ 250 ಸೀಟಗಳ ಮಿತಿಯೊಂದಿಗೆ ಬಿ.ಎಸ್ಸಿ. ನರ್ಸಿಂಗ್ ಕೋರ್ಸನ್ನು ಪ್ರಾರಂಭಿಸಲು ಅನುಮತಿ ನೀಡಬಹುದೆಂದು ಅಭಿಪ್ರಾಯಿಸಿದ್ದು, ಅದರಂತೆ, ಸದರಿ ಸಂಸ್ಥೆಗೆ 250 ಸೀಟುಗಳ ಮಿತಿಯೊಂದಿಗೆ ಬಿ.ಎಸ್ಸಿ ನರ್ಸಿಂಗ್ ಕೋರ್ಸನ್ನು ಪ್ರಾರಂಭಿಸಲು ಅನುಮತಿ ನೀಡಬಹುದೆಂದು ಮತ್ತು ಏಕಕಡತದಲ್ಲಿ, ದಿನಾಂಕ: 05.08.2024ರ ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ, ಸಂಸ್ಥೆಯವರು 150 ಸೀಟುಗಳಿಂದ 250 ಸೀಟುಗಳಿಗೆ ಹೆಚ್ಚಿಸಲು ಮತ್ತೊಮ್ಮೆ ಮನವಿ ಪತ್ರ ಸಲ್ಲಿಸಿದ್ದು, ಸದರಿ ಸಂಸ್ಥೆಗೆ 250 ಬಿಎಸ್ಸಿ ನರ್ಸಿಂಗ್ ಸೀಟುಗಳಿಗೆ ಹೆಚ್ಚಿಸಬಹುದು ಎಂಬ ಅಭಿಪ್ರಾಯದೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, BGS Vijnatham Institute of Nursing Sciences, Vijnatham South Campus, Nagarur, Dasanapura, Bengaluru North, Bengaluru-562123 ಈ ಸಂಸ್ಥೆಯಲ್ಲಿ 2024-25ನೇ ಸಾಲಿನಿಂದ ಬಿ.ಎಸ್ಸಿ ನರ್ಸಿಂಗ್ ಕೋರ್ಸಿನ ಪ್ರವೇಶಮಿತಿಯನ್ನು 150 ರಿಂದ 250ಕ್ಕೆ ಹೆಚ್ಚಿಸಿ, ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 264 ಎಂಎಂಸಿ 2024 (ಭಾಗ-1), ಬೆಂಗಳೂರು, ದಿನಾಂಕ: 08.08.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಆದಿಚುಂಚನಗಿರಿ ವಿಶ್ವವಿದ್ಯಾಲಯ ಇದರಡಿಯಲ್ಲಿ BGS Vijnatham Institute of Nursing Sciences, Vijnatham South Campus, Nagarur, Dasanapura Bengaluru North, Bengaluru-562123 ಈ ಸಂಸ್ಥೆಯಲ್ಲಿ 2024-25ನೇ ಸಾಲಿನಿಂದ ಬಿ.ಎಸ್ಸಿ ನರ್ಸಿಂಗ್ ಕೋರ್ಸಿನ ಪ್ರವೇಶಮಿತಿಯನ್ನು 150 ರಿಂದ 250ಕ್ಕೆ ಹೆಚ್ಚಿಸಿ, ಆದೇಶಿಸಿದೆ.

**ಷರತ್ತು ಮತ್ತು ನಿಬಂಧನೆಗಳು:-**

1. ಈ ಸಂಸ್ಥೆಯು ಆದಿಚುಂಚನಗಿರಿ ವಿಶ್ವವಿದ್ಯಾಲಯದ ಅಧಿನಿಯಮ, 2012ರ (2013ರ ಕರ್ನಾಟಕ ಅಧಿನಿಯಮ ಸಂಖ್ಯೆ:18) ಪ್ರಕರಣ 9ರ ಪ್ರಕಾರ ಮೇಲ್ಕಂಡ ಬಿ.ಎಸ್ಸಿ. ನರ್ಸಿಂಗ್ ಕೋರ್ಸಿನ ಶೇ. 40ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
2. ರಾಜ್ಯ ಸರ್ಕಾರ ಮತ್ತು ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
3. ವಿದ್ಯಾರ್ಥಿಗಳ ಪ್ರವೇಶವನ್ನು 2003 ರ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸುಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಮೇಲ್ಕಂಡ ಕೋರ್ಸುಗಳ ಪ್ರವೇಶಕ್ಕೆ, ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.
4. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
5. ಸದರಿ ಸಂಸ್ಥೆಯು ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

08/08/24

(ಶಿವಲಿಂಗಪ್ರಭು ವಾಲಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ವೈದ್ಯಕೀಯ ಶಿಕ್ಷಣ ಇಲಾಖೆ

**ಇವರಿಗೆ:**

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಕುಲಾಧಿಪತಿಗಳು, ಆದಿಚುಂಚನಗಿರಿ ವಿಶ್ವವಿದ್ಯಾಲಯ, ಬಿ.ಜಿ.ನಗರ, ಬೆಳ್ಳೂರು, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ, ಮಂಡ್ಯ – 571 448.
3. ಕುಲಸಚಿವರು, ಆದಿಚುಂಚನಗಿರಿ ವಿಶ್ವವಿದ್ಯಾಲಯ, ಬಿ.ಜಿ.ನಗರ, ಬೆಳ್ಳೂರು, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ, ಮಂಡ್ಯ – 571 448.
4. ಪ್ರಾಂಶುಪಾಲರು, BGS Vijnatham Institute of Nursing Sciences, Vijnatham South Campus, Nagarur, Dasanapura, Bengaluru North, Bengaluru-562123
5. ರಿಜಿಸ್ಟ್ರಾರ್, ಕೆ.ಎನ್.ಸಿ., ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಮಾನ್ಯ ವೈದ್ಯಕೀಯ ಶಿಕ್ಷಣ, ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ, ಬೆಂಗಳೂರು
3. ಸರ್ಕಾರದ ಜಂಟಿ ಕಾರ್ಯದರ್ಶಿರವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು